# ಕರ್ನಾಟಕ ಸರ್ಕಾರ

ಸಂಖ್ಯೆ:ಮಮಅಇ:ಬಾವಿನಿ:ಇತರೆ

ನಿರ್ದೇಶಕರ ಕಚೇರಿ,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,
1ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:22.04.2020

ಉಪ ನಿರ್ದೇಶಕರು,
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಎಲ್ಲಾ 30 ಜಿಲ್ಲೆಗಳು

" ತುರ್ತು "

ಮಾನ್ಯರೆ,

**ವಿಷಯ** : ರಾಜ್ಯದಲ್ಲಿ ಬಾಲ್ಯ ವಿವಾಹಗಳು ನಡೆಯುತ್ತಿರುವ ಬಗ್ಗೆ "Rise in Child marriage, Physical abuse complaints during lockdown" ಶೀರ್ಷಿಕೆಯಡಿಯಲ್ಲಿ ಹಿಂದೂ ದಿನಪತ್ರಿಕೆಯಲ್ಲಿ ಪ್ರಕಟಗೊಂಡ ವರದಿಯ ಬಗ್ಗೆ

**ಉಲ್ಲೇಖ** : 1) ಮಕ್ಕಳ ಸಹಾಯವಾಣಿಯಲ್ಲಿ ಸ್ವೀಕೃತವಾಗುತ್ತಿರುವ ದೂರುಗಳು
2) ದಿನಾಂಕ:22.04.2020ರ "ಹಿಂದೂ" ಆಂಗ್ಲ ದಿನ ಪತ್ರಿಕೆ

*******

ವಿಷಯಕ್ಕೆ ಸಂಬಂಧಿಸಿದಂತೆ ದಿನಾಂಕ:22.04.2020ರಂದು "ಹಿಂದೂ" ಆಂಗ್ಲ ದಿನಪತ್ರಿಕೆಯಲ್ಲಿ "Rise in Child marriage, Physical abuse complaints during lockdown" ಶೀರ್ಷಿಕೆಯಡಿಯಲ್ಲಿ ಪ್ರಕಟವಾಗಿರುವ ವರದಿಯಂತೆ ರಾಜ್ಯದಲ್ಲಿ ಕೊರೊನಾ ವೈರಸ್ ಸಾಂಕ್ರಾಮಿಕವಾಗಿ ಹರಡುತ್ತಿರುವ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ವಿಧಿಸಲಾಗಿರುವ ಲಾಕ್‌ಡೌನ್ ಅವಧಿಯಲ್ಲಿ ಬಾಲ್ಯ ವಿವಾಹಗಳು ಹೆಚ್ಚಾಗಿ ನಡೆಯುತ್ತಿದ್ದು, ದಿನಾಂಕ:25.03.2020ರಿಂದ 05.04.2020ರವರೆಗೆ ಬಾಲ್ಯ ವಿವಾಹಕ್ಕೆ ಸಂಬಂಧಿಸಿದಂತೆ ಸುಮಾರು 37 ಹಾಗೂ ಮಕ್ಕಳ ಮೇಲಿನ ಶಾರೀರಿಕ ದೌರ್ಜನ್ಯದ ಬಗ್ಗೆ ಸುಮಾರು 32 ಕರೆಗಳು ಸ್ವೀಕೃತವಾಗಿದ್ದು, ಹೆಚ್ಚಿನ ದೂರುಗಳು ಉತ್ತರ ಕರ್ನಾಟಕದ ಗ್ರಾಮೀಣ ಭಾಗದಿಂದ ಸ್ವೀಕೃತವಾಗಿರುವುದಾಗಿ ತಿಳಿಸಲಾಗಿದೆ.

ಮುಂದುವರೆದಂತೆ, ದಿನಾಂಕ:26.04.2020ರಂದು ಅಕ್ಷಯ ತೃತೀಯ ದಿನವಾಗಿದ್ದು ಬಾಲ್ಯ ವಿವಾಹ ಪ್ರಕರಣಗಳು ಹೆಚ್ಚು ನಡೆಯುವ ಸಾಧ್ಯತೆಯಿರುವುದರಿಂದ ಎಲ್ಲಾ ಬಾಲ್ಯ ವಿವಾಹ ನಿಷೇಧ ಅಧಿಕಾರಿಗಳು ಈ ಬಗ್ಗೆ ಹೆಚ್ಚಿನ ಗಮನಹರಿಸಿ ಬಾಲ್ಯ ವಿವಾಹ ತಡೆಗಟ್ಟುವ ಬಗ್ಗೆ ಕಟ್ಟು ನಿಟ್ಟಿನ ಕ್ರಮವಹಿಸುವಂತೆ ಸೂಚಿಸಿದೆ.

ತಮ್ಮ ವಿಶ್ವಾಸಿ,
ನಿರ್ದೇಶಕರು
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ
ಬೆಂಗಳೂರು.

:E:S.S.N:E:OFFICE:LETTERS:E:OFFICE:ALL:LETTERS: